# ಕರ್ನಾಟಕ ವಿಧಾನಪರಿಷತ್ತು

ನೂರ ನಲವತ್ತ ಮೂರನೆಯ ಅಧಿವೇಶನದ ಮುಂದುವರೆದ ಉಪವೇಶನ

**ಚುಕ್ಕೆ ರಹಿತ ಪ್ರಶ್ನೆ**

ದಿನಾಂಕ : 18-03-2021 ಪ್ರಶ್ನೆ ಸಂಖ್ಯೆ : 1349(1580)

ಸದಸ್ಯರ ಹೆಸರು ಮತ್ತು ಕ್ಷೇತ್ರ : ಶ್ರೀ ಪ್ರಕಾಶ್ ಕೆ. ರಾಥೋಡ್(ನಾಮನಿರ್ದೇಶನ ಹೊಂದಿದವರು)

ಉತ್ತರ ನೀಡಬೇಕಾದ ದಿನಾಂಕ : 18-03-2021

ಉತ್ತರಿಸುವ ಸಚಿವರು: ಮಾನ್ಯ ಮುಖ್ಯಮಂತ್ರಿಗಳು

ವಿಷಯ : ಕರ್ನಾಟಕ ಲೋಕಸೇವಾ ಆಯೋಗದ ಬಗ್ಗೆ

(ಅ) ಕರ್ನಾಟಕ ಲೋಕಸೇವಾ ಆಯೋಗವು ನಡೆಸಿದ 2015ನೇ ಸಾಲಿನ ಗೆಜೆಟೆಡ್ ಪ್ರೊಬೇಷನರಿ ಹುದ್ದೆಗಳ ನೇಮಕಾತಿಯ ಕುರಿತಂತೆ ಕರ್ನಾಟಕ ಲೋಕಸೇವಾ ಆಯೋಗವು ಕರ್ನಾಟಕ ರಾಜ್ಯ ದತ್ತಾಂಶ ಕೇಂದ್ರ (Karnataka State Data Centre) (Center for e-governance) ಅಂದರೆ ಇ-ಆಡಳಿತ ಕೇಂದ್ರದ ಮುಖ್ಯ ಪರೀಕ್ಷೆಯ ಡಿಜಿಟಲ್ ಮೌಲ್ಯಮಾಪನದಲ್ಲಿ ಅಭ್ಯರ್ಥಿಗಳು ಪಡೆದ ವಿಷಯವಾರು ಅಂಕಗಳನ್ನು kpscresults.karnataka.gov.in ಎಂಬ ವೆಬ್ ಡೊಮೈನ್‌ನ ಮೂಲಕ ಪ್ರಕಟಿಸಲಾಗಿದೆಯೇ ;

(ಆ) ಕರ್ನಾಟಕ ಲೋಕಸೇವಾ ಆಯೋಗವು ನಡೆಸಿದ 2015ನೇ ಸಾಲಿನ ಗೆಜೆಟೆಡ್ ಪ್ರೊಬೇಷನರಿ ಹುದ್ದೆಗಳ ನೇಮಕಾತಿಯ ಮುಖ್ಯ ಪರೀಕ್ಷೆಯ ಡಿಜಿಟಲ್ ಮೌಲ್ಯಮಾಪನ ಪ್ರಕ್ರಿಯೆಯನ್ನು ಕೈಗೊಳ್ಳುವ ಸಲುವಾಗಿ TCS (TATA CONSULTANCY SERVICES) ಜೊತೆಗೆ ಒಪ್ಪಂದವಾಗಿದ್ದಲ್ಲಿ, ಆ ಒಪ್ಪಂದದಲ್ಲಿ ರಾಜ್ಯ ದತ್ತಾಂಶ ಕೇಂದ್ರ (Karnataka State Data Centre) (Center for e-governance) ಅಂದರೆ ಇ-ಆಡಳಿತ ಕೇಂದ್ರವು ವಿಷಯವಾರು ಅಂಕಗಳನ್ನು ಪ್ರಕಟಿಸಲು ಸೇವಾದಾತ ಕಂಪನಿಯಾದ TCS (TATA CONSULTANCY SERVICES) ನ ಸಹಮತ ಇದೆಯೇ; ವಿವರಿಸುವುದು?